# ಕರ್ನಾಟಕ ಸರ್ಕಾರ

ವಿಷಯ: ಶ್ರೀ ಬಿ.ಪಿ. ಹನುಮಂತರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಕಡೂರು ಇವರ ವಿರುದ್ಧದ ಇಲಾಖಾ ವಿಚಾರಣೆಯಲ್ಲಿನ ಅಂತಿಮ ಆದೇಶ.

ಓದಲಾಗಿದೆ: 1. ಕಾರಣ ಕೇಳುವ ನೋಟೀಸು ದಿನಾಂಕ:08-11-2011.
2. ಶ್ರೀ ಬಿ.ಪಿ. ಹನುಮಂತರಾಯಪ್ಪ, ಇವರ ಲಿಖಿತ ಹೇಳಿಕೆ ದಿ:23-11-2011.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 115 ವಿಸೇಬಿ 2011 ದಿ:31-12-2012.
4. ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿ:23-08-2013
5. 2ನೇ ಕಾರಣ ಕೇಳುವ ನೋಟೀಸು ದಿ:20-09-2013.

-----

ಪ್ರಸ್ತಾವನೆ:

ಶ್ರೀ ಬಿ.ಪಿ. ಹನುಮಂತರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡೂರು, ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದರೆನ್ನಲಾದ ಈ ಕೆಳಕಂಡ ಕರ್ತವ್ಯಲೋಪದ ಆಪಾದನೆಗಳ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಯೋಜನಾ ನಿರ್ದೇಶಕರು, ಡಿಆರ್‌ಡಿಎ ಕೋಶ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲಾಗಿತ್ತು. :-

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಆದೇಶ ಸಂಖ್ಯೆ: ಜಿಪಲಂಚಿ/ಅ5/ಸಿಆರ್/103 2008-09 ದಿನಾಂಕ: 16-12-2008 ರಲ್ಲಿ ತಾಲ್ಲೂಕು ಪಂಚಾಯತಿಯಿಂದ ಅನುಷ್ಠಾನಗೊಳಿಸುವ ಎಲ್ಲಾ ಲೆಕ್ಕ ಶೀರ್ಷಿಕೆಗಳ ಸಾದಿಲ್ವಾರು ಬಿಲ್ಲುಗಳಿಗೆ ಮೇಲಾಧಿಕಾರಿಗಳಿಂದ ಮೇಲು ಸಹಿ ಪಡೆದು ನಂತರ ಕ್ರಮ ವಹಿಸಲು ಸೂಚಿಸಿದ್ದರೂ ಸಹ ಮೇಲಾಧಿಕಾರಿಗಳ ಆದೇಸವನ್ನು ಲೆಕ್ಕಸದೆ ನೀವು ಬಿಲ್ಲುಗಳಿಗೆ ಸಹಿ ಮಾಡಿ ನೇರವಾಗಿ ಡಿ.ಸಿ. ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಿ, ಬಿಲ್ಲನ್ನು ಪಾವತಿಸಿರುವ ಮೂಲಕ ಕರ್ತವ್ಯಲೋಪವೆಸಗಿರುತ್ತಾರೆ.
2) ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2008-09 ನೇ ಸಾಲಿಗೆ ರೂ. 5344.43 ಲಕ್ಷಗಳಿಗೆ ಭೌತಿಕ 8448 ಕಾಮಗಾರಿಗಳಿಗೆ ಕ್ರಿಯಾ ಯೋಜನೆಗೆ ಅನುಮೋದನೆಗೊಂಡಿದ್ದರೂ ಸಹ ನೋಂದಾಯಿತ ಅಕುಶಲ ಕಾರ್ಮಿಕ ಕುಟುಂಬಗಳಿಗೆ ಉದ್ಯೋಗ ಕಲ್ಪಿಸುವಲ್ಲಿ ವಿಫಲರಾಗಿದ್ದು, ಉದ್ಯೋಗ ಖಾತ್ರಿ ಅಧಿನಿಯಮ-2005 ರನ್ವಯ ಜನಸಾಮಾನ್ಯರಿಗೆ. ರೂ. 22.722 ಲಕ್ಷಗಳಾಗಿದ್ದು. ಸದರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನದಲ್ಲಿ ವಿಫಲರಾಗುವ ಮೂಲಕ ಕರ್ತವ್ಯಲೋಪವೆಸಗಿರುತ್ತಾರೆ.

ವಿಚಾರಣಾಧಿಕಾರಿಯವರು, ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ ಅಪಾದಿತ ಅಧಿಕಾರಿ ವಿರುದ್ಧದ ಮೊದಲನೇ ಆರೋಪವು ಸಾಬೀತಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಅದರಂತೆ ಅಪಾದಿತ ಅಧಿಕಾರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ವಿಚಾರಣಾ ವರದಿಯ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಿ ಅವರ ಲಿಖಿತ ರಕ್ಷಣಾ ಹೇಳಿಕೆ ಸಲ್ಲಿಸಲು ಸೂಚಿಸಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿಯು ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸಿ ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿ ಆರೋಪಗಳಿಂದ ದೋಷ ಮುಕ್ತಗೊಳಿಸಲು ಕೋರಿರುತ್ತಾರೆ.

ವಿಚಾರಣಾಧಿಕಾರಿಗಳು ದಿನಾಂಕ: 23-08-2013 ರಂದು ಸಲ್ಲಿಸಿರುವ ವಿಚಾರಣಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಹಾಗೂ ಅಪಾದಿತ ಅಧಿಕಾರಿಯು 2ನೇ ಕಾರಣ ಕೇಳುವ ನೋಟೀಸಿಗೆ ಸಲ್ಲಿಸಿರುವ ಲಿಖಿತ ರಕ್ಷಣಾ ಹೇಳಿಕೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದೆ. ಆಪಾದಿತ ಅಧಿಕಾರಿ ಸಲ್ಲಿಸಿರುವ ಲಿಖಿತ ರಕ್ಷಣಾ ಹೇಳಿಕೆಯು ಸಮರ್ಥನೀಯವಾಗಿಲ್ಲದ ಕಾರಣ ಅವರ

ಲಿಖಿತ ರಕ್ಷಣಾ ಹೇಳಿಕೆಯನ್ನು ತಿರಸ್ಕರಿಸಿ, ಪ್ರಕರಣದಲ್ಲಿ ಆಪಾದಿತ ಅಧಿಕಾರಿಯು ಎಲ್ಲಾ ಲೆಕ್ಕ ಶೀರ್ಷಿಕೆಗಳ ಸಾದಿಲ್ವಾರು ಬಿಲ್ಲುಗಳಿಗೆ ಮೇಲು ಸಹಿ ಮಾಡಿಸಿಕೊಂಡು ಕ್ರಮ ವಹಿಸಲು ಸೂಚಿಸಿದರೂ ಸಹ ಸದರಿ ಸೂಚನೆಗಳನ್ನು ಲೆಕ್ಕಿಸದೆ ನೇರವಾಗಿ ಖಜಾನೆಗೆ ಸಲ್ಲಿಸಿ ಬಿಲ್ಲುಗಳನ್ನು ಪಾವತಿಸಿ ಕರ್ತವ್ಯಲೋಪವೆಸಗಿರುವುದನ್ನು ಮನಗಂಡು ಹಾಗೂ ಇಲಾಖಾ ವಿಚಾರಣೆಯಲ್ಲಿ ರುಜುವಾತಾದ ಆರೋಪಗಳಿಗನುಗುಣವಾಗಿ ಸದರಿ ಅಧಿಕಾರಿಯ ಕರ್ತವ್ಯಲೋಪಕ್ಕೆ ಸಂವಾದಿಯಾಗಿ "ವಾಗ್ದಂಡನೆಯ" ದಂಡನೆ ವಿಧಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 115 ವಿಸೇಬಿ 2011 ಬೆಂಗಳೂರು, ದಿನಾಂಕ:29-04-2014.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಬಿ.ಪಿ. ಹನುಮಂತರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡೂರು, ಪ್ರಸ್ತುತ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ, ಚಿಕ್ಕಬಳ್ಳಾಪುರ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(ii) ರನ್ವಯ, "ವಾಗ್ದಂಡನೆ" ದಂಡನೆ ವಿಧಿಸಿ ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು
4. ಶ್ರೀ ಬಿ.ಪಿ. ಹನುಮಂತರಾಯಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡೂರು, ಪ್ರಸ್ತುತ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ, ಚಿಕ್ಕಬಳ್ಳಾಪುರ
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
6. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
7. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.